# ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೊಂದನೇ ಅಧಿವೇಶನ)

**ಕಾರ್ಯಕಲಾಪಗಳ ಪಟ್ಟಿ**

ಸೋಮವಾರ, ದಿನಾಂಕ 12ನೇ ಡಿಸೆಂಬರ್, 2011

(ಸಮಯ: ಬೆಳಿಗ್ಗೆ 11.00 ಗಂಟೆಗೆ)

## 1. ಪ್ರಶ್ನೋತ್ತರ

| | | |
|---|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಐದನೇ ಪಟ್ಟಿ |
| ಆ) ದಿನಾಂಕ 05.12.2011ರ ಮೊದಲನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 5(267) | : | ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು. |
| ಇ) ದಿನಾಂಕ 05.12.2011 ಮೊದಲನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಎಸ್. ಮುನಿರಾಜು ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 6(124) | : | ಸಣ್ಣ ನೀರಾವರಿ,ಕನ್ನಡ ಮತ್ತು ಸಂಸ್ಕೃತಿ ಸಚಿವರು |
| ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಐದನೇ ಪಟ್ಟಿ |

## 2. ವರದಿಯನ್ನೊಪ್ಪಿಸುವುದು

ಶ್ರೀ ಶ್ರೀಶೈಲಪ್ಪ ವಿ.ಬಿದರೂರ, ಮಾನ್ಯ ಸದಸ್ಯರು ಹಾಗೂ 2010–11 ಸಾಲಿನ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಅಧ್ಯಕ್ಷರು, ಸಮಿತಿಯ ಮೊದಲನೇ ವರದಿಯನ್ನು ಮಂಡಿಸುವುದು.

## 3. ವಿತ್ತೀಯ ಕಾರ್ಯಕಲಾಪ

ಶ್ರೀ ಡಿ.ವಿ.ಸದಾನಂದಗೌಡ (ಮುಖ್ಯಮಂತ್ರಿಗಳು) ಅವರು 2011–12ನೇ ಸಾಲಿನ ಪೂರಕ ಅಂದಾಜುಗಳನ್ನು (ಎರಡನೇ ಕಂತು) ಮಂಡಿಸುವುದು.

ಪು.ತಿ.ನೋ.

**4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ**

ಶ್ರೀಯುತರಾದ ಸಿದ್ದರಾಮಯ್ಯ, ಟಿ.ಬಿ. ಜಯಚಂದ್ರ, ಸಿ.ಎಸ್.ನಾಡಗೌಡ, ಕೆ.ಅಭಯಚಂದ್ರ, ಕಿಮ್ಮನೆ ರತ್ನಾಕರ ಹಾಗೂ ಇತರರು ರಾಜ್ಯದ 100 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಸರ್ಕಾರ ಇತ್ತೀಚೆಗೆ ಘೋಷಣೆ ಮಾಡಿದ್ದು, ಬರಪರಿಹಾರ ಕಾಮಗಾರಿಗಳನ್ನು ಸಮರೋಪಾದಿಯಲ್ಲಿ ಕೈಗೊಳ್ಳುವ ಬಗ್ಗೆ ಮುಂದುವರೆದ ಚರ್ಚೆ.(ಎರಡನೇ ದಿನ)

**5. ಶಾಸನ ರಚನೆ**

## I. ವಿಧೇಯಕವನ್ನು ಮಂಡಿಸುವುದು

**1) ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕ, 2011**
**ಶ್ರೀ ಸಿ.ಪಿ.ಯೋಗೇಶ್ವರ ( ಅರಣ್ಯ ಸಚಿವರು) ಅವರು:–**

ಅ) 2011ನೇ ಸಾಲಿನ ಕರ್ನಾಟಕ ಅರಣ್ಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## II. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1) ಕರ್ನಾಟಕ ಜಲಸಾರಿಗೆ ಮಂಡಳಿ (ತಿದ್ದುಪಡಿ)ವಿಧೇಯಕ, 2011**
**ಶ್ರೀ ಜೆ.ಕೃಷ್ಣ ಪಾಲೆಮಾರ್, (ಬಂದರು ಮತ್ತು ಒಳನಾಡು ಜಲಸಾರಿಗೆ, ಜೀವಶಾಸ್ತ್ರ ಮತ್ತು ಪರಿಸರ, ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:–**

ಅ) 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**6. ಗಮನ ಸೆಳೆಯುವ ಸೂಚನೆ**

1. ಶ್ರೀ ಭರಮಗೌಡ ಅಲಗೌಡ ಕಾಗೆ ಅವರು ಬೆಳಗಾವಿ ಜಿಲ್ಲೆ ಅಥಣಿ ತಾಲ್ಲೂಕಿನ ಉಗಾರ ಖುರ್ದ ಸಹಕಾರಿ ನೀರಾವರಿ ಸಂಘ ನಿಯಮಿತವು 432 ಜನ ಸದಸ್ಯರನ್ನೊಳಗೊಂಡಿದ್ದು ಇವರುಗಳು 1986ನೇ ಇಸವಿಯಿಂದ 2400 ಎಕರೆ ಜಮೀನಿಗೆ ನೀರು ಒದಗಿಸಿದ್ದು, ಸದರಿ ರೈತರುಗಳಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ ಮಾನ್ಯ ಇಂಧನ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.

2. ಶ್ರೀ ಗೂಳಿಹಟ್ಟಿ ಡಿ. ಶೇಖರ ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಉಚಿತವಾಗಿ ನೀಡುವ ಶಾಲಾಬ್ಯಾಗ್, ಪುಸ್ತಕ, ಪೆನ್ ಮುಂತಾದ ವಸ್ತುಗಳ ಖರೀದಿಯಲ್ಲಿ ಅವ್ಯವಹಾರವಾಗಿ ಸರ್ಕಾರಕ್ಕೆ ಲಕ್ಷಾಂತರ ರೂಪಾಯಿ ಮೋಸ ಮಾಡಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರ ಗಮನ ಸೆಳೆಯುವುದು.

3. ಶ್ರೀ ಸಿದ್ದರಾಮಯ್ಯ ಮತ್ತು ಅಮರೇಗೌಡ ಬಯ್ಯಾಪುರ ಅವರುಗಳು ರಾಜ್ಯದಲ್ಲಿ ಹವಾಮಾನ ವೈಫಲ್ಯ ಹಾಗೂ ದುಂಡಾಣು ಅಂಗಮಾರಿ ರೋಗದಿಂದ ದಾಳಿಂಬೆ ಬೆಳೆಯು ಸಂಪೂರ್ಣ ನಾಶವಾಗಿ ರೈತರು ಕಂಗಾಲಾಗಿದ್ದು, ಬಹುತೇಕ ರೈತರು ಬ್ಯಾಂಕುಗಳಿಂದ ಸಾಲ ಪಡೆದು ತೀರಿಸಲು ಸಾಧ್ಯವಾಗದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದು ರೈತರ ಸಾಲವನ್ನು ಮನ್ನಾ ಮಾಡುವ ಕುರಿತು ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರ ಗಮನ ಸಳೆಯುವುದು.

4. ಶ್ರೀ ಟಿ.ಬಿ ಜಯಚಂದ್ರ, ಅವರು ಶಿರಾ ತಾಲ್ಲೂಕಿನಲ್ಲಿ O.A.P., P.H.P, ವಿಧವಾ ವೇತನ, ಸಂಧ್ಯಾ ಸುರಕ್ಷಾ ಯೋಜನೆಗಳು ಕಳೆದ ಒಂದು ವರ್ಷದಿಂದ ಸ್ಥಗಿತಗೊಂಡಿರುವ ಬಗ್ಗೆ ಹಾಗೂ ರಾಜ್ಯದಲ್ಲಿ ವಿಕಲಚೇತನರ ಹಿತದೃಷ್ಟಿಯಿಂದ ಮರುಪರಿಶೀಲಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸಳೆಯುವುದು.

5. ಶ್ರೀ ಹೆಚ್.ಡಿ. ರೇವಣ್ಣ ಮತ್ತು ಸಿ.ಎಸ್. ಪುಟ್ಟೇಗೌಡ ಅವರುಗಳು ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಉದಯಪುರ ಹಾಗೂ ಬಾಗೂರು ಮತ್ತು ಹಾಸನ ತಾಲ್ಲೂಕಿನ ಶಾಂತಿಗ್ರಾಮ ಹೋಬಳಿಯ ಮೊಸಳೆ ಹೊಸಹಳ್ಳಿ, ಹೊಳೆನರಸೀಪುರ ತಾಲ್ಲೂಕಿನ ಹರಿಹರಪುರಗಳಲ್ಲಿ 2007-08ರಲ್ಲಿ ಸರ್ಕಾರಿ ಐ.ಟಿ.ಐ. ತರಬೇತಿ ಸಂಸ್ಥೆಗಳನ್ನು ಸ್ಥಾಪಿಸಿದ್ದು, ಸಂಸ್ಥೆಗಳಿಗೆ ಕಟ್ಟಡಗಳಿಲ್ಲದೇ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

6. ಶ್ರೀ ಕರಡಿ ಸಂಗಣ್ಣ, ಅವರು ಕೊಪ್ಪಳ ನಗರದಲ್ಲಿ ಹೊಸ ಸಂಚಾರಿ ಪೊಲೀಸ್ ಠಾಣೆ ಇಲ್ಲದೆ ಇರುವುದರಿಂದ ನಗರ ಸಾರ್ವಜನಿಕರಿಗೆ ಹಾಗೂ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಹೊಸ ಸಂಚಾರಿ ಪೊಲೀಸ್ ಠಾಣೆ ಪ್ರಾರಂಭಿಸುವ ಬಗ್ಗೆ ಮಾನ್ಯ ಗೃಹ ಮತ್ತು ಸಾರಿಗೆ ಸಚಿವರ ಗಮನ ಸಳೆಯುವುದು.

7. ಶ್ರೀ ಹೆಚ್.ಡಿ.ರೇವಣ್ಣ ಮತ್ತು ಹೆಚ್.ಕೆ.ಕುಮಾರಸ್ವಾಮಿ ಅವರುಗಳು ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕು, ಹೆತ್ತೂರು, ಯಸಳೂರು ಮತ್ತು ಹಾನಬಾಳು ಪ್ರದೇಶಗಳಲ್ಲಿ ಅತಿ ಹೆಚ್ಚು ಮಳೆಯಾದ ಕಾರಣ ಏಲಕ್ಕಿ ಬೆಳೆಗೆ ಗುಣಪಡಿಸಲಾಗದ ರೋಗದಿಂದ ಬೆಳೆ ನಾಶವಾಗಿದ್ದು, ರೈತರು ಆರ್ಥಿಕ ತೊಂದರೆಗೆ ಒಳಗಾಗಿರುವ ಬಗ್ಗೆ ಮಾನ್ಯ ತೋಟಗಾರಿಕಾ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.

8. ಶ್ರೀ ಕಿಮ್ಮನೆ ರತ್ನಾಕರ ಅವರು ಬಸವ ಇಂದಿರಾ-ಆವಾಸ್ ಯೋಜನೆ ಮೂಲಕ ಬಡವರಿಗೆ ವಿತರಣೆ ಆಗಬೇಕಾದ ಮನೆಗಳನ್ನು ಹಕ್ಕು ಪತ್ರವನ್ನು ಹೊಂದಿದವರಿಗೆ ಮಾತ್ರ ನೀಡಬೇಕೆಂದು ಕಡ್ಡಾಯಗೊಳಿಸಿ, ಅರ್ಹ ಫಲಾನುಭವಿಗಳಿಗೆ ಬಸವ-ಇಂದಿರಾ ಆವಾಸ್ ಯೋಜನೆಯು ಮಲೆನಾಡು ಭಾಗಗಳಾದ, ಕೊಡಗು, ಶಿವಮೊಗ್ಗ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಜಿಲ್ಲೆಗಳ ಬಡವರು, ವಂಚಿತರಾಗಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಟಿ.ಬಿ.ಜಯಚಂದ್ರ ಅವರು ಕೃಷಿ ಯಂತ್ರೋಪಕರಣ ಯೋಜನೆಯಲ್ಲಿ ಸಂಸ್ಥೆ ಮತ್ತು ಉಪಕರಣವಾರು ವಿವರಗಳನ್ನು ಕೃಷಿ ನಿರ್ದೇಶನಾಲಯ ಪೂರ್ವಾನುಮತಿ ಪಡೆಯದೇ ರೈತರಿಗೆ ಸಹಾಯ ಧನ ನೀಡಲು ಬರದಿರುವ ಕಾರಣ ರೈತರಿಗೆ ಬೇಕಾದ ಉಪಕರಣ ತಯಾರಿಕಾ ಸಂಸ್ಥೆಯಿಂದ ಪಡೆಯುವ ಮೂಲ ಹಕ್ಕಿಗೆ ಧಕ್ಕೆಯಾಗಿದ್ದು 2011-12ನೇ ಸಾಲಿನಲ್ಲಿ ಯಾರೊಬ್ಬರಿಗೂ ಸೌಲಭ್ಯ ದೊರಕಿಲ್ಲದಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಸಕಲೇಶಪುರ ಕ್ಷೇತ್ರದ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ-48ರಿಂದ ಆನೆಮಹಲ್, ಹಾನಬಾಳು ಮತ್ತು ಹುರಡಿ ಮೂಲಕ ಮೂಡಿಗೆರೆ ಸೇರುವ 20 ಕಿ.ಮಿ ಲೋಕೋಪಯೋಗಿ ರಸ್ತೆ ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವುದರಿಂದ ಈ ರಸ್ತೆ ಪುನರ್ ನಿರ್ಮಾಣದ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

11. ಶ್ರೀ ನೆ.ಲ.ನರೇಂದ್ರಬಾಬು ಅವರು ಬೆಂಗಳೂರು ಉತ್ತರ ತಾಲ್ಲೂಕು, ಅಗಡಿ ರಸ್ತೆ, ಯಶವಂತಪುರ ಹೋಬಳಿ, ಶ್ರೀಗಂಧದ ಕಾವಲು ಗ್ರಾಮದ ಸಮೀಪವಿರುವ ಸುಮ್ಮನಹಳ್ಳಿ - ರಿಂಗ್ ರಸ್ತೆ ಸರ್ವೆ ನಂ.60 ಮತ್ತು 68ರಲ್ಲಿ ಇರುವ ಜಮೀನನ್ನು ಬಿ.ಡಿ.ಎ.ಗೆ ಪರಬಾರೆ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಅದನ್ನು ಸ್ಥಗಿತಗೊಳಿಸಿ, ನಿರಾಶ್ರಿತರ ಪುನರ್ ವಸತಿ ಕೇಂದ್ರಕ್ಕೆ ಉಳಿಸಿಕೊಂಡು ಮೀಸಲಿಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

12. ಶ್ರೀ ಕಿಮ್ಮನೆ ರತ್ನಾಕರ ಅವರು ಶಿವಮೊಗ್ಗ ಜಿಲ್ಲಾ ಪಂಚಾಯತ್ ದಿನಾಂಕ 19.11.2011, 26.11.2011, 03.12.2011ರಂದು ನಡೆದ ಸಾಮಾನ್ಯ ಸಭೆಯನ್ನು ಶಿವಮೊಗ್ಗ ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ 3054ರ ಜಿಲ್ಲಾ ಪಂಚಾಯಿತಿ ಅಭಿವೃದ್ಧಿಗೆ ಹಣ ವಿತರಣೆಯಾಗದೆ ಜಿಲ್ಲಾ ಪಂಚಾಯಿತಿ ಸದಸ್ಯರ ಹಕ್ಕನ್ನು ಮೊಟಕುಗೊಳಿಸಿದ ಬಗ್ಗೆ ಪ್ರತಿಭಟನೆ, ಸರ್ಕಾರಿ ಆಜ್ಞೆಯನ್ನು ಸುಟ್ಟ ಪ್ರಕರಣ ಮಾಧ್ಯಮಗಳಲ್ಲಿ ಪ್ರಕಟಣೆಗೊಂಡಿದ್ದು, ಈ ವಿಷಯಕ್ಕೆ ಸಂಬಂಧಿಸಿದಂತೆ ಪೂರ್ಣ ವರದಿ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.

13. ಪ್ರಕಾಶ್ ಬಾಬಣ್ಣ ಹುಕ್ಕೇರಿ ಅವರು ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಒದಗಿಸುವ ಅನುದಾನ ಬಳಕೆಗಿರುವ ಮಾನದಂಡಗಳನ್ನು ಉಲ್ಲಂಘಿಸಿ, ಬೆಳಗಾವಿ ಜಿಲ್ಲಾ ಪಂಚಾಯತ್‌ನಲ್ಲಿ ಅನುದಾನದ ದುರ್ಬಳಕೆಯಾಗಿದ್ದು ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರ ಗಮನ ಸೆಳೆಯುವುದು.

14. ಜೆ.ಡಿ.ನಾಯ್ಕ ಅವರು ಭಟ್ಕಳ ತಾಲ್ಲೂಕು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕೆಲಸ ಮಾಡುವಾಗ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಯಾವ ಪ್ರಗತಿಯನ್ನು ಸಾಧಿಸದಿರುವುದರಿಂದ ಅವರನ್ನು ವರ್ಗಾವಣೆ ಮಾಡಲಾಗಿದ್ದು, ಸದರಿ ಅಧಿಕಾರಿಯನ್ನು ಪುನ: ಭಟ್ಕಳಕ್ಕೆ ವರ್ಗಾವಣೆ ಮಾಡಬಾರದೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರ ಗಮನ ಸೆಳೆಯುವುದು.

## 7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರಾದ ಹೆಚ್.ಡಿ.ರೇವಣ್ಣ, ವೆಂಕಟರಾವ್ ನಾಡಗೌಡ, ಹಾಗೂ ಇತರರು ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳಿಗೆ ಬೆಲೆ ಕುಸಿದಿರುವುದರಿಂದ ರೈತರು ಸಂಕಷ್ಟಕ್ಕೀಡಾಗಿರುವುದರಿಂದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)